CW.3 PW.3

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ., ಕನಕಪುರ ರವರ ನ್ಯಾಯಾಲಯದಲ್ಲಿ**

# CC No.1044/2021

| | |
|---|---|
| ಸಾಕ್ಷಿದಾರರ ಹೆಸರು | ಕೈಲಾಶ್ ಮೂರ್ತಿ |
| ತಂದೆಯ ಹೆಸರು | ಪುಟ್ಟಣ್ಣಶೆಟ್ಟಿ |
| ವಯಸ್ಸು | 59 ವರ್ಷ |
| ವೃತ್ತಿ | ಖಾಸಗಿ ಕೆಲಸ |
| ವಿಳಾಸ | ಉಯ್ಯಂಬಳ್ಳಿ |
| ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ | 26.02.2026 |

**ಮುಖ್ಯ ವಿಚಾರಣೆ ಎ ಪಿ ಪಿ ರವರಿಂದಃ-**

ಆರೋಪಿಯನ್ನು ನೋಡಿರುತ್ತೇನೆ. ಈ ದಿನ ನ್ಯಾಯಾಲಯದಲ್ಲಿ ಹಾಜರಿರುತ್ತಾರೆ. ನಾನು ಆರೋಪಿಯನ್ನು ಠಾಣೆಯ ಹತ್ತಿರ ನೋಡಿರುತ್ತೇನೆ. ಚಾಸಾ-1, 2, 4 ರಿಂದ 8 ರವರು ಗೊತ್ತಿರುತ್ತ್ರೆ.

ಸುಮಾರು 7 ರಿಂದ 8 ವರ್ಷಗಳ ಹಿಂದೆ ಠಾಣೆಯಲ್ಲಿ ನಾನು ಒಂದು ಮಹಜರ್ ಗೆ ಸಹಿ ಮಾಡಿರುತ್ತೇನೆ. ಅಪಘಾತವಾಗಿರುತ್ತದೆಂದು ಹೇಳಿ ಸಹಿ ಪಡೆದಿರುತ್ತಾರೆ. ಆ ಸಮಯದಲ್ಲಿ ಏನೇನು ಮಾಡಿರುತ್ತಾರೆಂದು ನೆನಪಿರುವುದಿಲ್ಲ. ನನ್ನ ಜೊತೆ ಚಾಸಾ-1 ಮತ್ತು 4 ರವರು ಆ ದಿನ ಹಾಜರಿದ್ದರು. ನನ್ನ ಮುಂದೆ ಒಂದು ಲಾರಿ ಹಾಗೂ ಮೋಟಾರ್ ಬೈಕ್ ಅಂದರೆ ಅಪಘಾತ ಪಡಿಸಿದ ಹಾಗೂ ಅಪಘಾತಕ್ಕೆ ಒಳಗಾದ ವಾಹನಗಳನ್ನು ಅಮಾನತು ಪಡಿಸಿಕೊಂಡಿರುತ್ತಾರೆ. ಅದರ ಸಂಖ್ಯೆ ನೆನಪಿಲ್ಲ.

ಸಾಕ್ಷಿಗೆ ಸದರಿ ಪ್ರಕರಣದ ಸ್ಥಳ ಪಂಚನಾಮೆಯನ್ನು ತೋರಿಸಲಾಗಿ ಸಾಕ್ಷಿಯು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-3 ಎಂದು ಆಗಿದ್ದು ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿದಾರ ಭಾಗಶಃ ಪ್ರತಿಕೂಲ ಸಾಕ್ಷಿ ನುಡಿದ ಕಾರಣ ಸ.ಸ ಅ ರವರು ಸಾಕ್ಷಿಯನ್ನು ಪಾಟೀ ಸವಾಲನ್ನು ಮಾಡಲು ಅನುಮತಿ ನೀಡಲು ಕೋರಿದ ಮೇರೆಗೆ ಅನುಮತಿ ನೀಡಲಾಯಿತು).**

**ಪಾಟೀ ಸವಾಲುಃ ಸ. ಸ. ಅ. ರವರಿಂದ**

ದಿಃ08.09.2018 ರಂದು ತುಂಗಣಿ ಗೇಟ್ ಬಳಿ ಕೆ ಹೆಚ್ ಪಿ ಲೇಔಟ್ ಮುಂದಿನ ಕನಕಪುರ ಬೆಂಗಳೂರು ಹೆದ್ದಾರಿ ರಸ್ತೆಯಲ್ಲಿ ಸ್ಥಳ ಮಹಜರ್ ಮಾಡಿರುತ್ತಾರೆಂದರೆ ಸರಿ. ಪೋಲೀಸರು ಸದರಿ ಸ್ಥಳದಲ್ಲಿ ಕೆಎ-03-ಎಎ-7740 ಟಾಟಾ ಕಂಪನಿಯ ಮಹೇಂದ್ರ ಲಾರಿಯನ್ನು ಅಮಾನತು ಪಡಿಸಿಕೊಂಡಿರುತ್ತಾರೆಂದರೆ ಸರಿ. ಅದೇ ರೀತಿ ಕೆಎ-05-ಹೆಚ್ ಟಿ -3108 ಹಿರೋ ಹೊಂಡಾ ಸ್ಲೆಂಡರ್ ಪ್ಲಸ್ ವಾಹನವನ್ನು ಅಮಾನತು ಪಡಿಸಿಕೊಂಡಿರುತ್ತಾರೆಂದರೆ ಸರಿ. ಸದರಿ ಪಂಚನಾಮೆಯನ್ನು ಸಂಜೆ 4 ಗಂಟೆಯಿಂದ 5 ಗಂಟೆಯವರೆಗೂ ಬರೆದಿರುತ್ತಾರೆಂದರೆ ಸರಿ.

**ಪಾಟೀ ಸವಾಲುಃ ಆರೋಪಿ ಪರ ವಕೀಲರು ಪಾಟೀ ಸವಾಲಿಗೆ ಸಮಯವಕಾಶ ಕೋರಿದ್ದು ಯಾವುದೇ ಸೂಕ್ತ ಕಾರಣ ಇಲ್ಲದೇ ಇರುವ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**ಓ ಹೇ ಕೇ ಸರಿ ಇದೆ**

**ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ.,**

CW.3 PW.3

**ಕನಕಪುರ .**